All India Radio: Bangalore
National Bulletin In Kannada
06.10.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ರೈತರು ಸ್ವದೇಶಿ ಉತ್ಪನ್ನಗಳನ್ನು ಮಾತ್ರ ಬಳಸುವಂತೆ - ಕೇಂದ್ರ ಗೃಹ ಸಚಿವ ಅಮಿತ್ ಶಾ ಮನವಿ
2. ಯುದ್ಧದ ಸ್ವರೂಪ ಮೂಲಭೂತ ಪರಿವರ್ತನೆಗೆ ಒಳಗಾಗಿದೆ- ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅಭಿಮತ
3. ಇದೇ ೯ ರಿಂದ ಆಸ್ಟ್ರೇಲಿಯಾಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎರಡು ದಿನಗಳ ಅಧಿಕೃತ ಭೇಟಿ
4. ಮಹಿಳಾ ಏಕದಿನ ವಿಶ್ವಕಪ್: ಪಾಕಿಸ್ತಾನ ವಿರುದ್ಧ ಭಾರತ ತಂಡ ಜಯಭೇರಿ

<><><><>

ಸ್ವದೇಶಿ ಉತ್ಪನ್ನಗಳನ್ನು ಮಾತ್ರ ಬಳಸಬೇಕೆಂಬ ಪ್ರಧಾನಿ ನರೇಂದ್ರ ಮೋದಿಯವರ ಮನವಿಯನ್ನು ರೈತರು ಪಾಲಿಸಬೇಕೆಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮನವಿ ಮಾಡಿದರು. ಮಹಾರಾಷ್ಟ್ರದ ಅಹಲ್ಯಾನಗರ ಜಿಲ್ಲೆಯಲ್ಲಿ ಪದ್ಮಶ್ರೀ ಡಾ. ವಿಠ್ಠಲರಾವ್ ವಿಖೆ ಪಾಟೀಲ್ ಮತ್ತು ಪದ್ಮಭೂಷಣ ಡಾ. ಬಾಳಾಸಾಹೇಬ್ ವಿಠ್ಠಲರಾವ್ ವಿಖೆ ಪಾಟೀಲ್ ಅವರ ಪ್ರತಿಮೆಗಳನ್ನು ಅನಾವರಣಗೊಳಿಸಿದ ನಂತರ ಅವರು ಮಾತನಾಡುತ್ತಿದ್ದರು. ೧೪೦ ಕೋಟಿ ಜನಸಂಖ್ಯೆಯನ್ನು ಹೊಂದಿರುವ ಭಾರತ, ವಿಶಾಲವಾದ ಮಾರುಕಟ್ಟೆಯನ್ನು ಪ್ರತಿನಿಧಿಸುತ್ತದೆ. ನಾಗರಿಕರು ಸಾಮೂಹಿಕವಾಗಿ ಸ್ಥಳೀಯ ಉತ್ಪನ್ನಗಳನ್ನು ಬಳಸಲು ಮತ್ತು ಉತ್ತೇಜಿಸಲು ಆಯ್ಕೆ ಮಾಡಿಕೊಂಡರೆ, ಅದು ದೇಶದ ಆರ್ಥಿಕ ಬೆಳವಣಿಗೆಯನ್ನು ಗಮನಾರ್ಹವಾಗಿ ವೇಗಗೊಳಿಸುತ್ತದೆ ಎಂದು ಅಮಿತ್ ಶಾ ಹೇಳಿದರು.

ಧ್ವನಿ : ಅಮಿತ್ ಶಾ (೨೮ ಸೆಕೆಂಡ್‌ಗಳು)

ಭಾರತ ಈಗಾಗಲೇ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವತ್ತ ದಾಪುಗಾಲು ಇಡುತ್ತಿದೆ. ಜಾಗತಿಕವಾಗಿ ಉನ್ನತ ಸ್ಥಾನವನ್ನು ಸಾಧಿಸಲು ಸ್ವದೇಶಿ ಉತ್ಪನ್ನ ಬಳಕೆಗೆ ಬಲವಾದ ಬದ್ಧತೆಯ ಅಗತ್ಯವಿರುತ್ತದೆ ಎಂದರು. ಮಹಾರಾಷ್ಟ್ರದಲ್ಲಿ ಭಾರೀ ಮಳೆಯಿಂದ ಹಾನಿಗೊಳಗಾದ ರೈತರಿಗೆ ಕೇಂದ್ರ ಸರ್ಕಾರ ಸಕಾಲಿಕ ಸಹಾಯವನ್ನು ನೀಡುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಭರವಸೆ ನೀಡಿದರು. ಪರಿಸ್ಥಿತಿಯನ್ನು ಚರ್ಚಿಸಲು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹಾಗೂ ಉಪಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಮತ್ತು ಅಜಿತ್ ಪವಾರ್ ಅವರನ್ನು ಭೇಟಿ ಮಾಡಿರುವುದಾಗಿ ಹಾಗೂ ಹಾನಿ ಮತ್ತು ನಷ್ಟಗಳ ಕುರಿತು ವಿವರವಾದ ವರದಿಯನ್ನು ಸಲ್ಲಿಸಲು ರಾಜ್ಯ ಸರ್ಕಾರವನ್ನು ಕೇಳಲಾಗಿದೆ ಎಂದು ಅವರು ತಿಳಿಸಿದರು.

<><><><>

ಇತ್ತೀಚಿನ ವರ್ಷಗಳಲ್ಲಿ ಯುದ್ಧದ ಸ್ವರೂಪವು ಮೂಲಭೂತ ಪರಿವರ್ತನೆಗೆ ಒಳಗಾಗಿದೆ. ಇದು ಮುಂದುವರಿದ ಶಸ್ತ್ರಾಸ್ತ್ರಗಳು ಮತ್ತು ತಂತ್ರಜ್ಞಾನದಿಂದ ರೂಪುಗೊಂಡ ಸಂಪರ್ಕರಹಿತ ಯುದ್ಧಗಳ ಹೊಸ ಯುಗವನ್ನು ಸೂಚಿಸುತ್ತದೆ. ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕೌಟಿಲ್ಯ ಆರ್ಥಿಕ ಸಮಾವೇಶದಲ್ಲಿ ಮಾತನಾಡಿದ ಅವರು, ಅಜರ್-ಬೈ-ಅರ್ಮೇನಿಯಾದಿಂದ ಉಕ್ರೇನ್-ರಷ್ಯಾ, ಇಸ್ರೇಲ್-ಇರಾನ್ ನಡುವಿನ ಸಂಘರ್ಷಗಳು ಸಾಂಪ್ರದಾಯಿಕ ಶಸ್ತ್ರಾಸ್ತ್ರಗಳೊಂದಿಗೆ ಸಂಪರ್ಕರಹಿತ ಯುದ್ಧಗಳನ್ನು ಪ್ರತಿಬಿಂಬಿಸುತ್ತದೆ. ಇದು ಹೆಚ್ಚು ಪ್ರಭಾವಶಾಲಿ ಮತ್ತು ಕೆಲವೊಮ್ಮೆ ನಿರ್ಣಾಯಕ ಫಲಿತಾಂಶಗಳನ್ನು ನೀಡುತ್ತದೆ ಎಂದರು.

ಧ್ವನಿ : ಡಾ. ಜೈಶಂಕರ್ (೨೮ ಸೆಕೆಂಡ್‌ಗಳು)

ಅಪರೂಪದ ಭೂಮಿಯ ಖನಿಜಗಳು ಮತ್ತು ಕಾರ್ಯತಂತ್ರದ ಸಂಪನ್ಮೂಲಗಳ ಸ್ಪರ್ಧೆಯು ಆಧುನಿಕ ಜಾಗತಿಕ ಪೈಪೋಟಿಯ ನಿರ್ಣಾಯಕ ಲಕ್ಷಣವಾಗಿದೆ. ವ್ಯಾಪಾರ ಮತ್ತು ತಂತ್ರಜ್ಞಾನದಿಂದ ಹಣಕಾಸು ಹಾಗೂ ಪೂರೈಕೆ ಸರಪಳಿಗಳವರೆಗೆ ಎಲ್ಲವನ್ನೂ ಶಸ್ತ್ರಸಜ್ಜಿತಗೊಳಿಸುವ ಪ್ರವೃತ್ತಿ ಹೆಚ್ಚುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು. ಭಾರತ-ಅಮೆರಿಕ ಸಂಬಂಧಗಳ ಕುರಿತು, ನಡೆಯುತ್ತಿರುವ ವ್ಯಾಪಾರ ಸಮಸ್ಯೆಗಳನ್ನು ಪರಿಹರಿಸಲು ಅಮೆರಿಕದೊಂದಿಗೆ ಭಾರತ ಮಾತುಕತೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದೆ ಎಂದು ಡಾ. ಜೈಶಂಕರ್ ತಿಳಿಸಿದರು. ಉತ್ಪಾದನೆಯನ್ನು ಅಭಿವೃದ್ಧಿಪಡಿಸಲು, ಜೀವನ ಸುಲಭಗೊಳಿಸಲು

ಮತ್ತು ಸಮಗ್ರ ರಾಷ್ಟ್ರೀಯ ಶಕ್ತಿಯನ್ನು ಮುನ್ನಡೆಸಲು ಜಾಗತಿಕ ಬದಲಾವಣೆಗಳಿಗೆ ಭಾರತದ ವಿಧಾನವನ್ನು ಅವರು ಒತ್ತಿ ಹೇಳಿದರು.

<><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಈ ತಿಂಗಳ ೯ ರಿಂದ ಆಸ್ಟ್ರೇಲಿಯಾಕ್ಕೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಆಸ್ಟ್ರೇಲಿಯಾದ ಉಪ ಪ್ರಧಾನಿ ಮತ್ತು ರಕ್ಷಣಾ ಸಚಿವ ರಿಚರ್ಡ್ ಮಾರ್ಲೆಸ್ ಅವರ ಆಹ್ವಾನದ ಮೇರೆಗೆ ಸಚಿವರು ಆಸ್ಟ್ರೇಲಿಯಾಕ್ಕೆ ಭೇಟಿ ನೀಡುತ್ತಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಿಡ್ನಿಯಲ್ಲಿ ವ್ಯಾಪಾರ ದುಂಡು ಮೇಜಿನ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಇದರಲ್ಲಿ ಉಭಯ ದೇಶಗಳ ಉದ್ಯಮ ಮುಖಂಡರು ಭಾಗವಹಿಸಲಿದ್ದಾರೆ. ಅವರು ಆಸ್ಟ್ರೇಲಿಯಾದ ಇತರ ರಾಷ್ಟ್ರೀಯ ನಾಯಕರನ್ನು ಸಹ ಭೇಟಿ ಮಾಡಲಿದ್ದಾರೆ. ಈ ಭೇಟಿಯು ದ್ವಿಪಕ್ಷೀಯ ಸಂಬಂಧ ಮತ್ತು ರಕ್ಷಣಾ ಪಾಲುದಾರಿಕೆಯನ್ನು ಬಲಪಡಿಸಲು ಹೊಸ ಮತ್ತು ಅರ್ಥಪೂರ್ಣ ಉಪಕ್ರಮಗಳನ್ನು ಅನ್ವೇಷಿಸಲು ಎರಡೂ ಕಡೆಯವರಿಗೆ ಅವಕಾಶವನ್ನು ಒದಗಿಸುತ್ತದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ. ಭೇಟಿಯ ಸಮಯದಲ್ಲಿ, ಮೂರು ಒಪ್ಪಂದಗಳಿಗೆ ಸಹಿ ಹಾಕಲು ಯೋಜಿಸಲಾಗಿದೆ. ಇದು ಮಾಹಿತಿ ಹಂಚಿಕೆ, ಕಡಲ ಕ್ಷೇತ್ರ ಮತ್ತು ಜಂಟಿ ಚಟುವಟಿಕೆಗಳ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಇಂದಿನಿಂದ ಕತಾರ್‌ನ ದೋಹಾಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಪಿಯೂಷ್ ಗೋಯಲ್ ಅವರು ಕತಾರ್‌ನ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಶೇಖ್ ಫೈಸಲ್ ಬಿನ್ ಫೈಸಲ್ ಅಲ್ ಥಾನಿ ಅವರೊಂದಿಗೆ ಕತಾರ್-ಭಾರತ ಜಂಟಿ ಆಯೋಗದ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಭೇಟಿಯು ಕತಾರ್‌ನೊಂದಿಗಿನ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳಿಗೆ ಭಾರತ ನೀಡುವ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಭೇಟಿಯ ಹೊರತಾಗಿ, ಸಚಿವ ಪಿಯೂಷ್ ಗೋಯಲ್, ಕತಾರ್‌ನ ಇತರೆ ಗಣ್ಯರು, ಮತ್ತು ಕತಾರಿ ಉದ್ಯಮಿಗಳ ಸಂಘದ ಉನ್ನತ ಉದ್ಯಮಿಗಳನ್ನು ಸಹ ಭೇಟಿ ಮಾಡಲಿದ್ದಾರೆ. ಇದೇ ವೇಳೆ ಇನ್ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್

ಇಂಡಿಯಾದ ದೋಹಾದ ಪ್ರತಿನಿಧಿಗಳು, ಕತಾರ್‌ನ ಭಾರತೀಯ ವ್ಯಾಪಾರ ಮತ್ತು ವೃತ್ತಿಪರರ ಮಂಡಳಿ ಪ್ರತಿನಿಧಿಗಳು ಹಾಗೂ ಕತಾರ್‌ನಲ್ಲಿರುವ ಭಾರತೀಯ ಸಮುದಾಯದ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಲಿದ್ದಾರೆ.

<><><><>

ಕೇಂದ್ರ ಆರೋಗ್ಯ ಸಚಿವಾಲಯವು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ, ವಿಶೇಷವಾಗಿ ಮಕ್ಕಳಲ್ಲಿ, ಕೆಮ್ಮಿನ ಸಿರಪ್‌ಗಳ ತರ್ಕಬದ್ಧ ಬಳಕೆಯನ್ನು ಖಚಿತಪಡಿಸಿಕೊಳ್ಳಲು ಸಲಹೆ ನೀಡಿದೆ.ಮಧ್ಯಪ್ರದೇಶದ ಚಿಂದ್ವಾರದಲ್ಲಿ ಕೆಮ್ಮಿನ ಸಿರಪ್‌ಗೆ ಸಂಬಂಧಿಸಿದ ಮಕ್ಕಳ ಸಾವಿನ ಇತ್ತೀಚಿನ ಪ್ರಕರಣಗಳ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಕೇಂದ್ರ ಆರೋಗ್ಯ ಕಾರ್ಯದರ್ಶಿ ಪುಣ್ಯ ಸಲಿಲಾ ಶ್ರೀವಾಸ್ತವ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ, ಕೇಂದ್ರ ಸರ್ಕಾರ, ಔಷಧ ಗುಣಮಟ್ಟದ ಮಾನದಂಡಗಳ ಅನುಸರಣೆಯನ್ನು ಪರಿಶೀಲಿಸಿತು ಮತ್ತು ಎಲ್ಲಾ ಔಷಧ ತಯಾರಕರು ಪರಿಷ್ಕೃತ ವೇಳಾಪಟ್ಟಿ 'ಎಂ' ಅನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಸೂಚಿಸಿತು.

<><><><>

ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆದ ಮಹಿಳಾ ಏಕದಿನ ವಿಶ್ವಕಪ್ ಪಂದ್ಯದಲ್ಲಿ ಭಾರತ ತಂಡ, ಪಾಕಿಸ್ತಾನವನ್ನು ೮೮ ರನ್‌ಗಳಿಂದ ಸೋಲಿಸಿ, ಜಯಭೇರಿ ಬಾರಿಸಿತು. ಮಹಿಳಾ ಏಕದಿನ ಪಂದ್ಯದಲ್ಲಿ ಭಾರತ ತಂಡ, ಸಾಂಪ್ರದಾಯಿಕ ಎದುರಾಳಿಯಾದ ಪಾಕಿಸ್ತಾನ ವಿರುದ್ಧ ತನ್ನ ೧೨-೦ ಯ ಅಜೇಯ ದಾಖಲೆಯನ್ನು ಮುಂದುವರಿಸಿತು. ಮೊದಲು ಬ್ಯಾಟ್ ಮಾಡಿದ ಭಾರತ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೧೦ ವಿಕೆಟ್‌ಗಳ ನಷ್ಟಕ್ಕೆ ೨೪೭ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ, ಪಾಕಿಸ್ತಾನ ೪೩ ಓವರ್‌ಗಳಲ್ಲಿ ಕೇವಲ ೧೫೯ ರನ್‌ಗಳಿಗೆ ಆಲೌಟ್ ಆಯಿತು. ಭಾರತದ ಪರ ಹರ್ಲೀನ್ ಡಿಯೋಲ್ ೪೬ ರನ್, ರಿಚಾ ಘೋಷ್ ೩೫ ಮತ್ತು ಜೆಮಿಮಾ ರೊಡ್ರಿಗಸ್ ೩೨ ರನ್ ಗಳಿಸಿದರು. ಪಾಕಿಸ್ತಾನ ಪರ ಡಯಾನಾ ಬೇಗ್ ೪ ವಿಕೆಟ್ ಪಡೆದರು. ೨೪೮ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಪಾಕಿಸ್ತಾನ, ನಿಯಮಿತವಾಗಿ ವಿಕೆಟ್‌ಗಳನ್ನು ಕಳೆದುಕೊಂಡಿತು. ಪಾಕ್ ಪರ ಸಿದ್ರಾ ಅಮೀನ್ ೮೧ ರನ್ ಮತ್ತು ನಟಾಲಿಯಾ ಪರ್ವೈಜ್ ೩೩ ರನ್ ಹೊರತುಪಡಿಸಿ, ಪಾಕಿಸ್ತಾನದ ಉಳಿದ ಆಟಗಾರ್ತಿಯರಲ್ಲಿ ಯಾರೂ ಸ್ಕೋರ್‌ಗೆ ಯಾವುದೇ ಗಮನಾರ್ಹ ಕೊಡುಗೆ ನೀಡಲು ಸಾಧ್ಯವಾಗಲಿಲ್ಲ. ಕ್ರಾಂತಿ ಗೌಡ್ ಮತ್ತು ದೀಪ್ತಿ ಶರ್ಮಾ ತಲಾ

ಮೂರು ವಿಕೆಟ್‌ಗಳನ್ನು ಕಬಳಿಸಿದರೆ, ಸ್ನೇಹ್ ರಾಣಾ ಎರಡು ವಿಕೆಟ್‌ಗಳನ್ನು ಪಡೆದರು. ಭಾರತ ತಂಡ, ಇದೇ ಗುರುವಾರ ವಿಶಾಖಪಟ್ಟಣದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ.

<><><><>

ನವದೆಹಲಿಯಲ್ಲಿ ನಡೆದ ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ಆರು ಚಿನ್ನ, ಹತ್ತು ಬೆಳ್ಳಿ ಮತ್ತು ಆರು ಕಂಚು ಸೇರಿದಂತೆ ೨೨ ಪದಕಗಳೊಂದಿಗೆ ತನ್ನ ಅಭಿಯಾನವನ್ನು ಪೂರ್ಣಗೊಳಿಸಿತು. ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಡೆದ ಅಂತಿಮ ದಿನದ ಸ್ಪರ್ಧೆಯಲ್ಲಿ ಏಳು ಭಾರತೀಯರು ಸ್ಪರ್ಧಿಸಿದ್ದರು. ಸಿಮ್ರಾನ್ ಶರ್ಮಾ ೨೦೦ ಮೀಟರ್ ಟಿ-೧೨ ನಲ್ಲಿ ಬೆಳ್ಳಿ ಗೆದ್ದರು ಮತ್ತು ಪ್ರೀತಿ ಪಾಲ್ ೧೦೦ ಮೀಟರ್ ಟಿ-೩೫ ನಲ್ಲಿ ಬೆಳ್ಳಿ ಗೆದ್ದರು. ಇಬ್ಬರೂ ಈ ಆವೃತ್ತಿಯ ತಮ್ಮ ಎರಡನೇ ಪದಕವನ್ನು ಗೆದ್ದರು. ಪ್ಯಾರಾಲಿಂಪಿಕ್ ಚಾಂಪಿಯನ್ ನವದೀಪ್ ಜಾವೆಲಿನ್ ಥ್ರೋ ಎಫ್-೪೧ ನಲ್ಲಿ ಬೆಳ್ಳಿ ಗೆದ್ದರೆ, ಸಂದೀಪ್ ೨೦೦ ಮೀಟರ್ ಟಿ-೪೪ ನಲ್ಲಿ ಕಂಚಿನ ಪದಕ ಗೆದ್ದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>